All India Radio: Bangalore
National Bulletin In Kannada
09.09.2026 7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
09.09.2026 7.35 am

<>><><*><><<>

ಮುಖ್ಯಾಂಶಗಳು

೧. ಫಿನ್‌ಟೆಕ್ ಕ್ಷೇತ್ರದಲ್ಲಿ ಭಾರತ ಅಸಾಮಾನ್ಯ ಪ್ರಗತಿ; ಯುಪಿಐ ಯಶಸ್ಸಿನ ಸಾರಥಿ- ಪ್ರಧಾನಿ ನರೇಂದ್ರ ಮೋದಿ ಶ್ಲಾಘನೆ

೨. ವಾರಾಣಸಿಯಲ್ಲಿ ಇಂದು ೯ನೇ ರಾಷ್ಟ್ರೀಯ ಪೋಷಣ್ ಮಾಸಾಚರಣೆಗೆ ಚಾಲನೆ

೩. ಶ್ರೀಲಂಕಾದ ಸಂಕಷ್ಟದ ಸಮಯದಲ್ಲಿ ಭಾರತದಿಂದ ಸದಾ ಬೆಂಬಲ- ರಕ್ಷಣಾ ಸಚಿವ ರಾಜನಾಥ್ ಸಿಂಗ್

೪. ಭಾರತ - ಕುವೈತ್ ಎಂಟನೇ ವಿದೇಶಾಂಗ ಕಚೇರಿ ಸಮಾಲೋಚನಾ ಸಭೆ ಸಂಪನ್ನ

೫. ವಿಶ್ವ ಬಿಲ್ಲುಗಾರಿಕೆ ಪ್ಯಾರಾ ಸರಣಿ; ವಿವಿಧ ಪದಕ ಪಂದ್ಯಗಳಲ್ಲಿ ಇಂದು ಭಾರತೀಯ ಬಿಲ್ಲುಗಾರರು ಕಣದಲ್ಲಿ

<>><><*><><<>

ಭಾರತದ ಫಿನ್‌ಟೆಕ್ ಕ್ಷೇತ್ರ ಅಭೂತಪೂರ್ವ ಪ್ರಗತಿ ಸಾಧಿಸಿದ್ದು, ದೇಶದ ಏಕೀಕೃತ ಪಾವತಿ ವ್ಯವಸ್ಥೆ- ಯುಪಿಐ ಈ ಯಶಸ್ಸಿನ ಸಾರಥಿಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ಮುಂಬೈನಲ್ಲಿ ನಿನ್ನೆ ಜಾಗತಿಕ ಫಿನ್‌ಟೆಕ್ ಉತ್ಸವ-೨೦೨೬ ಉದ್ಘಾಟಿಸಿ ಮಾತನಾಡಿದ ಅವರು, ಡಿಜಿಟಲ್ ಕ್ಷೇತ್ರದಲ್ಲಿ ಭಾರತ ಸಾಧಿಸಿರುವ ಈ ಪರಿವರ್ತನೆ ಅಗಾಧವಾಗಿದ್ದು, ಜಗತ್ತಿನಲ್ಲಿ ಫಿನ್‌ಟೆಕ್ ಕುರಿತ ಚರ್ಚೆಯಲ್ಲಿ ಯುಪಿಐ ಪ್ರಸ್ತಾಪವಿಲ್ಲದೆ ಅದು ಅಪೂರ್ಣವಾಗಲಿದೆ ಎಂದರು. ತಂತ್ರಜ್ಞಾನದ ಮೂಲಕ ಸಾರ್ವಜನಿಕರನ್ನು ಸಶಕ್ತಗೊಳಿಸುವ ಕುರಿತು ಮಾತನಾಡಿದ ಪ್ರಧಾನಿ ಸಾಂಪ್ರದಾಯಿಕ ಬ್ಯಾಂಕಿಂಗ್ ವ್ಯವಸ್ಥೆ ತಲುಪಲು ಸಾಧ್ಯವಾಗದ ಗ್ರಾಮೀಣ ಹಾಗೂ ದೂರದ ಪ್ರದೇಶಗಳಿಗೆ ತಲುಪಿ, ಜನಸಾಮಾನ್ಯರನ್ನು ಆರ್ಥಿಕ ಮುಖ್ಯವಾಹಿನಿಗೆ ತರಲು ಯುಪಿಐ ಪ್ರಮುಖ ಪಾತ್ರವಹಿಸುತ್ತಿದೆ ಎಂದರು.

ಆಗಸ್ಟ್ ತಿಂಗಳೊಂದರಲ್ಲೇ ೨೪ ಶತಕೋಟಿಗೂ ಅಧಿಕ ಯುಪಿಐ ವಹಿವಾಟುಗಳು ನಡೆದಿರುವುದನ್ನು ಈ ವೇಳೆ ಅವರು ಪ್ರಸ್ತಾಪಿಸಿದರು. ಯುಪಿಐ ಸಾಧಿಸಿರುವ ಈ ಕ್ರಾಂತಿಕಾರಿ ಬದಲಾವಣೆಯನ್ನು ಕಂಡು, ಫ್ರಾನ್ಸ್ ಅಧ್ಯಕ್ಷ ಎಮ್ಯಾನ್ಯುಯಲ್ ಮ್ಯಾಕ್ರಾನ್, ಯುಪಿಐ ಕೇವಲ ತಾಂತ್ರಿಕ ಪ್ರಗತಿಯಲ್ಲ. ಅದೊಂದು ಇಡೀ ನಾಗರಿಕತೆಯ ಯಶೋಗಾಥೆ ಎಂದು ಬಣ್ಣಿಸಿರುವುದನ್ನು ಪ್ರಧಾನಿ ನರೇಂದ್ರ ಮೋದಿ ಸ್ಮರಿಸಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೨೨ ಸೆಕೆಂಡ್ಸ್)

<>><><*><><<>

ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯದ ವತಿಯಿಂದ ೮ನೇ ರಾಷ್ಟ್ರೀಯ ಪೋಷಣ್ ಮಾಸಾಚರಣೆ-೨೦೨೫ಕ್ಕೆ ಇಂದು ಉತ್ತರಪ್ರದೇಶದ ವಾರಾಣಸಿಯಲ್ಲಿ ಅಧಿಕೃತವಾಗಿ ಚಾಲನೆ ದೊರೆಯಲಿದೆ. ಈ ಅಭಿಯಾನವನ್ನು ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣಾದೇವಿ ಉದ್ಘಾಟಿಸಲಿದ್ದಾರೆ. ಈ ವೇಳೆ ಉತ್ತರಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಉಪಸ್ಥಿತರಿರಲಿದ್ದಾರೆ. ಸೆಪ್ಟಂಬರ್ ತಿಂಗಳ ಪೂರ್ತಿ ನಡೆಯಲಿರುವ ಈ ಬೃಹತ್ ಜಾಗೃತಿ ಅಭಿಯಾನ, ಸಾರ್ವಜನಿಕರು ಹಾಗೂ ಸಮುದಾಯಗಳ ಸಕ್ರಿಯ ಭಾಗವಹಿಸುವಿಕೆಯೊಂದಿಗೆ ದೇಶಾದ್ಯಂತ ಇರುವ ಅಂಗನವಾಡಿ ಕೇಂದ್ರಗಳು, ಶಾಲೆಗಳು, ಪಂಚಾಯತಿಗಳು ಮತ್ತು ಮನೆಮನೆಗಳನ್ನು ತಲುಪಲಿದೆ. ಅಪೌಷ್ಟಿಕತೆ ಮುಕ್ತ ಭಾರತ ನಿರ್ಮಾಣದ ದೃಷ್ಟಿಯಿಂದ ಜನರಲ್ಲಿ ಜಾಗೃತಿ ಮೂಡಿಸಲು ರೂಪಿಸಲಾದ ಈ ಅಭಿಯಾನವನ್ನು ಈ ಬಾರಿ 'ನಮ್ಮ ಅಂಗನವಾಡಿ, ನಮ್ಮ ಜವಾಬ್ದಾರಿ' ಎಂಬ ಘೋಷವಾಕ್ಯದೊಂದಿಗೆ ಕಾರ್ಯಗತಗೊಳಿಸಲಾಗುತ್ತಿದೆ.

<>><><*><><<>

ಪ್ರಧಾನಮಂತ್ರಿಗಳ ವಸ್ತುಸಂಗ್ರಹಾಲಯ ಮತ್ತು ಗ್ರಂಥಾಲಯದ ಅಧೀನದಲ್ಲಿರುವ ಪ್ರಮುಖ ಸಾರ್ವಜನಿಕ ಸಂಪರ್ಕ ಕೇಂದ್ರವಾದ ನವೀಕೃತ ನೆಹರೂ ತಾರಾಲಯವನ್ನು ನವದೆಹಲಿಯಲ್ಲಿ ನಿನ್ನೆ ಉದ್ಘಾಟಿಸಲಾಯಿತು. ನವೀಕರಿಸಲಾದ ತಾರಾಲಯವು, ವಿಜ್ಞಾನ ಸಂವಹನವನ್ನು ಬಲಪಡಿಸುವುದು, ಖಗೋಳ ವಿಜ್ಞಾನದ ಕುರಿತು ಅರಿವು ಮೂಡಿಸುವುದು ಹಾಗೂ ಸಾರ್ವಜನಿಕರ ಪಾಲ್ಗೊಳ್ಳುವಿಕೆಯನ್ನು ಹೆಚ್ಚಿಸುವ ಉದ್ದೇಶ ಹೊಂದಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಸಂಸ್ಥೆಯ ನಿರ್ದೇಶಕರಾದ ಅಶ್ವಾನಿ ಲೋಹಾನಿ, ವೈಜ್ಞಾನಿಕ ಮನೋಭಾವ ಬೆಳೆಸಲು ಹಾಗೂ ವಿದ್ಯಾರ್ಥಿಗಳು, ಯುವಜನರು ಮತ್ತು ಸಾರ್ವಜನಿಕರಲ್ಲಿ ಕುತೂಹಲ ಮೂಡಿಸಲು ತಾರಾಲಯದಲ್ಲಿ ಅತ್ಯಾಧುನಿಕ ಸೌಲಭ್ಯಗಳನ್ನು ಕಲ್ಪಿಸಲಾಗಿದೆ ಎಂದು ತಿಳಿಸಿದರು.

<>><><*><><<>

ಶ್ರೀಲಂಕಾ ಯಾವುದೇ ರೀತಿಯ ಬಿಕ್ಕಟ್ಟು ಎದುರಿಸಿದಾಗಲೂ ಭಾರತ ಸದಾ ಅದರ ಬೆನ್ನೆಲುಬಾಗಿ ನಿಂತಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಪ್ರತಿಪಾದಿಸಿದ್ದಾರೆ. ಮೂರು ದಿನಗಳ ಅಧಿಕೃತ ಪ್ರವಾಸದ ಭಾಗವಾಗಿ ನಿನ್ನೆ ಶ್ರೀಲಂಕಾದ ಕೊಲಂಬೋಗೆ ಭೇಟಿ ನೀಡಿದ ಅವರು, ಭಾರತೀಯ ಸಮುದಾಯದವರನ್ನು ಉದ್ದೇಶಿಸಿ ಮಾತನಾಡಿದರು. ಉಭಯ ದೇಶಗಳ ನಡುವಿನ ಸಂಬಂಧವು ಹಂಚಿಕೆಯ ಇತಿಹಾಸ, ಸಂಸ್ಕೃತಿ ಮತ್ತು ನಂಬಿಕೆಯ ಬಲವಾದ ಅಡಿಪಾಯದ ಮೇಲೆ ನಿರ್ಮಾಣವಾಗಿದೆ ಎಂದು ಅವರು ಬಣ್ಣಿಸಿದರು. ಶ್ರೀಲಂಕಾದ ಉನ್ನತ ನಾಯಕರೊಂದಿಗೆ ದ್ವಿಪಕ್ಷೀಯ ಸಮಾಲೋಚನೆ ನಡೆಸಲಿರುವ ಸಚಿವ ರಾಜನಾಥ್ ಸಿಂಗ್, ಭಾರತ ಮತ್ತು ಶ್ರೀಲಂಕಾ ನಡುವಿನ ನಿಕಟ ಸಾಂಸ್ಕೃತಿಕ ಹಾಗೂ ನಾಗರಿಕತೆಯ ಬಾಂಧವ್ಯವೇ ದ್ವಿಪಕ್ಷೀಯ ಸಂಬಂಧಗಳ ಸುದೃಢ ಬೆಳವಣಿಗೆಗೆ ಪ್ರಮುಖ ಕಾರಣವಾಗಿದೆ ಎಂದು ಹೇಳಿದರು. ಈ ಪ್ರವಾಸವು ಉಭಯ ದೇಶಗಳ ರಕ್ಷಣೆ ಹಾಗೂ ಪ್ರಾದೇಶಿಕ ಕಡಲ ಭದ್ರತಾ ಸಹಕಾರವನ್ನು ಮತ್ತಷ್ಟು ವೃದ್ಧಿಸಲಿದೆ.

<>><><*><><<>

ಭಾರತ ಮತ್ತು ಕುವೈತ್ ವಿವಿಧ ಕ್ಷೇತ್ರಗಳಲ್ಲಿ ತಮ್ಮ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ಒಪ್ಪಿಕೊಂಡಿವೆ. ಭಾರತ ಮತ್ತು ಕುವೈತ್ ನಡುವಿನ ಎಂಟನೇ ವಿದೇಶಾಂಗ ಕಚೇರಿ ಸಮಾಲೋಚನಾ ಸಭೆ ನಿನ್ನೆ ಕುವೈತ್‌ನಲ್ಲಿ ನಡೆಯಿತು. ಸಭೆಯ ಸಹ-ಅಧ್ಯಕ್ಷತೆಯನ್ನು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿ ಅಸೀಮ್ ಮಹಾಜನ್ ಮತ್ತು ಕುವೈತ್ ವಿದೇಶಾಂಗ ಸಚಿವಾಲಯದ ಏಷ್ಯಾ ವ್ಯವಹಾರಗಳ ಸಹಾಯಕ ವಿದೇಶಾಂಗ ಸಚಿವ ನವಾಫ್ ಅಬ್ದುಲ್ಲತೀಫ್ ಸುಲೈಮಾನ್ ಅಲ್-ಅಹ್ಮದ್ ವಹಿಸಿದ್ದರು.

ಸಭೆಯಲ್ಲಿ ರಾಜಕೀಯ ಬಾಂಧವ್ಯ, ವ್ಯಾಪಾರ, ಹೂಡಿಕೆ, ರಕ್ಷಣಾ, ಭದ್ರತೆ, ಇಂಧನ, ತಂತ್ರಜ್ಞಾನ, ಕೃಷಿ, ಆರೋಗ್ಯ, ಸಂಸ್ಕೃತಿ ಹಾಗೂ ಜನರಿಂದ ಜನರ ನಡುವಿನ ಬಾಂಧವ್ಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಮಾರ್ಗಗಳ ಕುರಿತು ಉಭಯ ದೇಶಗಳು ಚರ್ಚಿಸಿದವು.

<>><><*><><<>

ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ಕೃಷ್ಣ ಸ್ವಾಮಿನಾಥನ್, ಇಂದಿನಿಂದ ಆಸ್ಟ್ರೇಲಿಯಾ ಮತ್ತು ನ್ಯೂಜಿಲೆಂಡ್‌ಗೆ ಅಧಿಕೃತ ಪ್ರವಾಸ ಕೈಗೊಳ್ಳಲಿದ್ದಾರೆ. ಪ್ರವಾಸದ ವೇಳೆ ಅಡ್ಮಿರಲ್ ಸ್ವಾಮಿನಾಥನ್, ರಾಯಲ್ ಆಸ್ಟ್ರೇಲಿಯ ನೌಕಾಪಡೆಯ ಹಿರಿಯ ಅಧಿಕಾರಿಗಳೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಆಸ್ಟ್ರೇಲಿಯಾದ ಹಿರಿಯ ರಕ್ಷಣಾ ಅಧಿಕಾರಿಗಳೊಂದಿಗೂ ಚರ್ಚೆ ನಡೆಸಲಿದ್ದಾರೆ. ಅವರು ಪ್ರಮುಖ ಕಾರ್ಯಾಚರಣೆ ಮತ್ತು ತರಬೇತಿ ಕೇಂದ್ರಗಳಿಗೆ ಭೇಟಿ ನೀಡಲಿದ್ದು, ರಾಯಲ್ ನ್ಯೂಜಿಲೆಂಡ್ ನೌಕಾಪಡೆಯ ಸಿಬ್ಬಂದಿ ಹಾಗೂ ವೃತ್ತಿಪರ ಸೇನಾ ಶಿಕ್ಷಣ ಪಡೆಯುತ್ತಿರುವ ಅಧಿಕಾರಿಗಳೊಂದಿಗೆ ಸಂವಾದ ನಡೆಸಲಿದ್ದಾರೆ.

<>><><*><><<>

ಅಮೆರಿಕ ಮತ್ತು ಇರಾನ್ ನಡುವಿನ ಪರಸ್ಪರ ದಾಳಿಯಿಂದ ಪಶ್ಚಿಮ ಏಷ್ಯಾದಾದ್ಯಂತ ಉದ್ವಿಗ್ನತೆ ತೀವ್ರಗೊಂಡಿದ್ದು, ಸಂಘರ್ಷ ಮತ್ತಷ್ಟು ವಿಸ್ತರಿಸುವ ಆತಂಕ ಎದುರಾಗಿದೆ. ಕಳೆದ ಎರಡು ದಿನಗಳಲ್ಲಿ ಅಮೆರಿಕದ ಯುದ್ಧನೌಕೆಯ ಮೇಲೆ ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕೋರ್-ಐಆರ್‌ಜಿಸಿ ದಾಳಿ ನಡೆಸಿದೆ. ಇದಕ್ಕೆ ಪ್ರತಿಯಾಗಿ ಇರಾನ್‌ನ ಐದು ಕಚ್ಚಾ ತೈಲ ಸಾಗಣೆ ಹಡಗುಗಳನ್ನು ಅಮೆರಿಕದ ಸೇನೆ ನಾಶಪಡಿಸಿದೆ ಎಂದು ಅಮೆರಿಕ ತಿಳಿಸಿದೆ. ಪ್ರತೀಕಾರವಾಗಿ ಇರಾನ್, ಜೋರ್ಡಾನ್‌ನಲ್ಲಿರುವ ಅಮೆರಿಕದ ನೆಲೆಗಳತ್ತ ಕ್ಷಿಪಣಿ ದಾಳಿ ನಡೆಸಿದೆ.

<>><><*><><<>

ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಗೌರವಧನವನ್ನು ಹೆಚ್ಚಿಸಿ ಉತ್ತರ ಪ್ರದೇಶ ಸರ್ಕಾರ ಆದೇಶ ಹೊರಡಿಸಿದೆ. ಆದೇಶದ ಪ್ರಕಾರ, ಅಂಗನವಾಡಿ ಕಾರ್ಯಕರ್ತೆಯರ ರಾಜ್ಯದ ಪಾಲಿನ ಗೌರವಧನವನ್ನು ತಿಂಗಳಿಗೆ ಹೆಚ್ಚುವರಿಯಾಗಿ ೪ ಸಾವಿರ ರೂಪಾಯಿ ಹಾಗೂ ಸಹಾಯಕಿಯರ ರಾಜ್ಯದ ಪಾಲಿನ ಗೌರವಧನವನ್ನು ತಿಂಗಳಿಗೆ ೨ ಸಾವಿರ ರೂಪಾಯಿ ಹೆಚ್ಚಿಸಲಾಗಿದೆ.

ಈ ಪರಿಷ್ಕರಣೆಯ ಬಳಿಕ ಅಂಗನವಾಡಿ ಕಾರ್ಯಕರ್ತೆಯರಿಗೆ ಒಟ್ಟು ೧೨ ಸಾವಿರ ರೂಪಾಯಿ ಗೌರವಧನ ದೊರೆಯಲಿದೆ.

<>><><*><><<>

ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ, ಗೋವಾದ ಪೋರ್ವರಿಮ್ ಎಲಿವೇಟೆಡ್ ಕಾರಿಡಾರ್ ಅನ್ನು ಇಂದು ಉದ್ಘಾಟಿಸಲಿದ್ದಾರೆ. ರಾಷ್ಟ್ರೀಯ ಹೆದ್ದಾರಿ-೬೬ರಲ್ಲಿ ನಿರ್ಮಿಸಲಾಗಿರುವ ಷಟ್‌ಪಥಗಳ ಈ ಕಾರಿಡಾರ್ ಐದು ಕಿಲೋಮೀಟರ್‌ಗೂ ಹೆಚ್ಚು ಉದ್ದವಿದೆ. ಸುಮಾರು ೬೪೧ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ಈ ಯೋಜನೆಯಿಂದ ಸಂಚಾರ ದಟ್ಟಣೆ ಕಡಿಮೆಯಾಗಲಿದ್ದು, ಪಣಜಿ ಮತ್ತು ರಾಜ್ಯದ ಉತ್ತರ ಭಾಗದ ನಡುವಿನ ಸಂಪರ್ಕ ಮತ್ತಷ್ಟು ಸುಧಾರಿಸುವ ನಿರೀಕ್ಷೆಯಿದೆ. ಇದೇ ೧೧ರಿಂದ ಕಾರಿಡಾರ್‌ನಲ್ಲಿ ನಿಯಮಿತ ವಾಹನ ಸಂಚಾರ ಆರಂಭವಾಗಲಿದೆ.

<>><><*><><<>

ಅಹಮದಾಬಾದ್‌ನಲ್ಲಿ ನಡೆಯುತ್ತಿರುವ ವಿಶ್ವ ಪ್ಯಾರಾ ಬಿಲ್ಲುಗಾರಿಕೆ ಸರಣಿಯಲ್ಲಿ ಭಾರತೀಯ ಪ್ಯಾರಾ ಬಿಲ್ಲುಗಾರರು ಇಂದು ಹಲವು ಪದಕಗಳ ನಿರೀಕ್ಷೆಯಲ್ಲಿದ್ದಾರೆ. ವಿವಿಧ ವಿಭಾಗಗಳ ಚಿನ್ನ ಮತ್ತು ಕಂಚಿನ ಪದಕ ಪಂದ್ಯಗಳಲ್ಲಿ ಭಾರತೀಯ ಬಿಲ್ಲುಗಾರರು ಸ್ಪರ್ಧಿಸಲಿದ್ದಾರೆ. ಪ್ಯಾರಾ ರಿಕರ್ವ್ ಮಿಶ್ರ ತಂಡದ ಚಿನ್ನದ ಪದಕದ ಪಂದ್ಯದಲ್ಲಿ ಭಾರತದ ಭಾವನಾ ಮತ್ತು ಹರ್ವಿಂದರ್ ಸಿಂಗ್ ಜೋಡಿ, ಪ್ಯಾರಾ ಕಾಂಪೌಂಡ್ ಮಹಿಳೆಯರ ವೈಯಕ್ತಿಕ ವಿಭಾಗದ ಫೈನಲ್‌ನಲ್ಲಿ ಭಾರತದ ಶೀತಲ್ ದೇವಿ ಸ್ಪರ್ಧಿಸುತ್ತಿದ್ದರೆ, ಪ್ಯಾರಾ ಕಾಂಪೌಂಡ್ ಮಿಶ್ರ ತಂಡದ ಕಂಚಿನ ಪದಕದ ಪಂದ್ಯದಲ್ಲಿ ಶೀತಲ್ ದೇವಿ ಹಾಗೂ ಟೋಮನ್ ಕುಮಾರ್ ಜೋಡಿ ಕಣಕ್ಕಿಳಿಯಲಿದೆ. ಪ್ಯಾರಾ ರಿಕರ್ವ್ ಮಹಿಳೆಯರ ಕಂಚಿನ ಪದಕದ ಪಂದ್ಯದಲ್ಲಿ ಭಾರತಕ್ಕೆ ಪದಕ ಖಚಿತವಾಗಿದೆ. ರಾಜಶ್ರೀ ಧನರಾಜ್ ರಾಥೋಡ್, ಭಾರತದವರೇ ಆದ ಭಾವನಾ ಅವರನ್ನು ಎದುರಿಸಲಿದ್ದಾರೆ. ಪ್ಯಾರಾ ಕಾಂಪೌಂಡ್ ಮಹಿಳೆಯರ ಕಂಚಿನ ಪದಕದ ಪಂದ್ಯದಲ್ಲಿ ಭಾರತದ ಸರಿತಾ ಹಾಗೂ ಪ್ಯಾರಾ ಕಾಂಪೌಂಡ್ ಪುರುಷರ ಕಂಚಿನ ಪದಕದ ಪಂದ್ಯದಲ್ಲಿ ಟೋಮನ್ ಕುಮಾರ್ ಕಣದಲ್ಲಿದ್ದಾರೆ.

<>><><*><><<>

೨೦೨೬ರ ಏಷ್ಯನ್ ಗೇಮ್ಸ್‌ಗೆ ತೆರಳಲಿರುವ ಭಾರತೀಯ ತಂಡಕ್ಕೆ ನವದೆಹಲಿಯಲ್ಲಿ ನಿನ್ನೆ ಅದ್ದೂರಿ ಬೀಳ್ಕೊಡುಗೆ ನೀಡಲಾಯಿತು.

ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವೀಯ ಅವರ ಸಮ್ಮುಖದಲ್ಲಿ ನಡೆದ ಸಮಾರಂಭದಲ್ಲಿ ಭಾರತೀಯ ಒಲಿಂಪಿಕ್ ಸಂಸ್ಥೆಯ ಅಧ್ಯಕ್ಷೆ ಪಿ.ಟಿ. ಉಷಾ, ಕ್ರೀಡಾ ಕಾರ್ಯದರ್ಶಿ ಹರಿ ರಂಜನ್ ರಾವ್ ಹಾಗೂ ತಂಡದ ಮುಖ್ಯಸ್ಥ ಸಹದೇವ್ ಯಾದವ್ ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಭಾರತೀಯ ತಂಡದ ಅಧಿಕೃತ ಜೆರ್ಸಿಯನ್ನು ಅನಾವರಣಗೊಳಿಸಲಾಯಿತು. ಕ್ರೀಡಾಪಟುಗಳು ಮತ್ತು ಸಹಾಯಕ ಸಿಬ್ಬಂದಿ ಸಮಾರಂಭದಲ್ಲಿ ಪಾಲ್ಗೊಂಡಿದ್ದರು. ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಸಚಿವ ಡಾ.ಮಾಂಡವೀಯ, ಕ್ರೀಡಾಪಟುಗಳು ಒತ್ತಡವನ್ನು ಉತ್ತಮ ಪ್ರದರ್ಶನವಾಗಿ ಪರಿವರ್ತಿಸಬೇಕು. ಎದುರಾಳಿಗಳನ್ನು ಅವಕಾಶಗಳಾಗಿ ಪರಿಗಣಿಸಿ, ಆ ಅವಕಾಶಗಳನ್ನು ಸಾಧನೆಗಳಾಗಿ ಪರಿವರ್ತಿಸಬೇಕು ಎಂದು ಕರೆ ನೀಡಿದರು.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>